## ನಾ ಸತ್ತು ಹೋದರೆ?

"ಈ ಹಾಳು ಪೇಪರಿನವರಿಗೆ ಕೊಡಲು ಬೇರೆ ಸುದ್ದಿನೇ ಇಲ್ವೇನೊ, ಬರೀ ಅಲ್ಲಿ ಅಷ್ಟು ಜನ ಸತ್ತರು, ಇಲ್ಲಿ ಕೊಲೆ ಆಯ್ತು, ಮತ್ತೆ ಬಿಟ್ಟರೆ ಆತ್ಮಹತ್ಯೆಗಳು ಇದೇ ಸುದ್ದಿ, ಮುಂಜಾನೆ ಮುಂಜಾನೆ ಇದನ್ನ ನೋಡಿ ಎದ್ದೇಳಬೇಕೇನೊ" ಅಂತ ವಟಗುಡುತ್ತ ಪೇಪರು ಬೀಸಾಕಿ ಮೇಲೆದ್ದಳು, ಸತ್ತ ಹೆಣದಂತೆ ಥೇಟ್ ಶವಾಸನ ಹಾಕಿ ಬಿದ್ದುಕೊಂಡಿದ್ದ ನನಗೆ ಒಮ್ಮೆಲೆ ಜೀವ ಬಂದಂತಾಯಿತು, "ಏನಾಯ್ತು" ಅಂತ ಅವಳನ್ನು ತಡೆದೆ, "ಒಹ್ ಏನು ಬೇಗ ಎಚ್ಚರಾಗಿದೆ, ಏನಿಲ್ರೀ, ಪೇಪರು ಸುದ್ದಿ ನೋಡೊಣ ಅಂತ ತೆರೆದರೆ ಸಾಕು, ಬರೀ ಅವೇ ಸುದ್ದಿ ಅದಕ್ಕೆ ಹಾಗಂದೆ, ಈಗಂತೂ ಈ ಹಂದಿಜ್ವರದಿಂದ ಸಾಯೋರ ಅಂಕಿಅಂಶಗಳೇ ಪೇಪರು ತುಂಬ, ದಿನ ಸಾಯೋರಿಗೆ ಅಳೋರು ಯಾರು ಅನ್ನೊ ಹಾಗೆ ತೀರಾ ಸಾಮಾನ್ಯ ಆಗಿಬಿಟ್ಟಿದೆ" ಅಂದ್ಲು, "ಅದೇನೊ ಕೇಳಿದ್ದೀನಿ ಮೊದಲೆಲ್ಲ ಪ್ಲೇಗ ಎಲ್ಲಾ ಬಂದು ಊರಿಗೆ ಊರೇ ಖಾಲಿ ಆಗ್ತಿದ್ವಂತೆ, ಅಳೋರು ಬಿಡು ಹಿಡಿ ಮಣ್ಣು ಹಾಕೋರೂ ಯಾರೂ ಇರ್ತಿರಲಿಲ್ಲ ಅಂತೆ. ಒಂದು ವೇಳೆ ನಾ ಸತ್ತು ಹೋದರೆ?..." ಮುಂದೇನೂ ಬಾಯಿ ಬಿಡದಂತೆ ಗಟ್ಟಿಯಾಗಿ ಮುಚ್ಚಿದಳು, "ಬಿಟ್ತು ಅನ್ನಿ, ಏನಂತ ಮಾತು ಆಡ್ತೀರ, ಅಪಶಕುನ ಅದೂ ಮುಂಜಾನೆ..." ಅಂತ ಬಯ್ದು ಎದ್ದು ಹೋದಳು... ನಾನೂ ಎದ್ದು ಹಿಂಬಾಲಿಸಿದೆ, "ನಾ ಸತ್ತು ಹೋದರೆ..." ಅಂತನ್ನುತ್ತ...

ಮುಖ ತೊಳೆದುಕೊಂಡು ಬಂದು ನನ್ನೇ ದುರುಗುಟ್ಟಿ ನೋಡುತ್ತ ದೇವರ ಮುಂದೆ ದೀಪ ಹಚ್ಚಿಟ್ಟು ಕಣ್ಣು ಮುಚ್ಚಿ ಏನೊ ಬೇಡಿಕೊಂಡು ಬಂದಳು, "ಅಲ್ಲ ನಾ ಎನ್ ಹೇಳ್ತ ಇದ್ದೆ ಅಂದ್ರೆ, ನಾ..." ಅಂತಿದ್ದಂಗೆ... "ರೀ ಆ ವಿಷಯ ಎತ್ತಿದ್ರೆ ಕೊಂದ ಹಾಕ್ತೀನಿ ಇನ್ನ್" ಅಂತ ಜಬರಿಸಿದಳು ನಸು ನಗುತ್ತ ಹಲ್ಲುಜ್ಜಲು ನಡೆದೆ, "ಎನು ನಗ್ತೀರ?" ಅಂತ ಮತ್ತೆ ಕೆದಕಿದಳು, "ನೀ ಕೊಂದು ಹಾಕಿದರೆ ನಾ ಸತ್ತು ಹೋಗ್ತೀನಿ ಅದಕ್ಕೆ ನಗು ಬಂತು" ಅಂದೆ, ಅವಳಿಗೂ ತಾನು ಸಿಟ್ಟಿನ ಭರದಲ್ಲಿ ಏನು ಹೇಳಿದೆ ಅಂತ ಗೊತ್ತಾಗಿ ನಗು ಬಂತು, ಹಾಗೇ ಮುಗುಳ್ನಗುತ್ತ "ಆ ಸುದ್ದಿ ಇನ್ನು ಎತ್ತಿದರೆ ನೋಡಿ ನನ್ನ ಮೇಲಾಣೆ" ಅಂತಂದು ಮುಚ್ಚಿಹಾಕಲು ನೋಡಿದಳು, ಮತ್ತೆ ಮಾಮೂಲಿ ಅದೇ ವಿಷಯಕ್ಕೇ ಬಂದೆ "ನಾ ಆಣೆ ಪಾಲಿಸದೇ ನೀ ಸತ್ತು ಹೋದರೆ?"(ಆಣೆ ಪ್ರಮಾಣ ಪಾಲಿಸದಿದ್ದರೆ ಆಣೆ ಯಾರ ಮೇಲೆ ಹಾಕಿರುತ್ತೆವೊ ಅವರು ಸತ್ತು ಹೋಗ್ತಾರಂತೆ, ನಾನಂತೂ ಪ್ರಯೋಗ ಮಾಡಿ ನೋಡಿಲ್ಲ ಬಿಡಿ, ಮಾಡಬೇಕೆಂದರೂ ಯಾರೂ ಸಿಕ್ಕಿಲ್ಲ!) ಈಗಂತೂ ಬಹಳೆ ಕಿರಿಕಿರಿ ಆಯ್ತು ಅಂತ ಕಾಣುತ್ತದೆ, ಕಸ ಗುಡಿಸಲು ಪೊರಕೆ ಹಿಡಿದು ನಿಂತಿದ್ದವಳು "ರೀಈಈಈ... ಇದಕ್ಕೆ ಪೊರಕೆ ಅಂತಾರೆ ಗೊತ್ತಲ್ವಾ... ಕಸ ಗುಡಿಸೋದು ಅಷ್ಟೇ ಅಲ್ಲ ಬೇರೇನೂ ಉಪಯೋಗ ಆಗ್ತದೆ, ಇದರಲ್ಲೇ ನಾಲ್ಕು ಕೊಡ್ತೀನಿ ಈವಾಗ" ಅಂತ ಹೆದರಿಸಿದಳು... "ಹ್ಮ್... ಎರದೇಟು ಜೋರಾಗಿ ಕೊಟ್ಟು ನಾ ಸತ್ತು ಹೋದರೆ?" ಅಂದೆ ಅವ್ಳು ನನ್ನೆಡೆಗೇ ಬರುವ ಹಾಗೆ ಕಾಣಿತು, ನಿಜಕ್ಕೂ ಪೊರಕೆ ಪೂಜೆ ಆದೀತು ಅಂತ ಬಾತ್ರೂಮ್ ಒಳಗೋಡಿ ಬಾಗಿಲು ಹಾಕಿಕೊಂಡೆ, ಬಂದು ಬಾಗಿಲು ಬಾರಿಸಿ "ಎನ್ ದಿನ ಪೂರ್ತಿ ಅಲ್ಲೇ ಇರ್ತೀರಾ, ಬನ್ನಿ ಹೊರಗೆ... ತಿಥಿ ಮಾಡ್ತೀನಿ" ಅಂದ್ಲು "ಲೇ ಸತ್ತ ಮೇಲೆ ತಿಥಿ ಮಾಡೊದಲ್ವಾ" ಅಂತ ಅಲ್ಲಿಂದಲೇ ಕೂಗಿದೆ. ಬಾಗಿಲು ಜೋರಾಗಿ ಕುಟ್ಟಿ ಹೊರಟುಹೋದಳಂತೆ ಕಾಣುತ್ತದೆ, ಹೊರಹೋದರೆ ನನ್ನ ತಿಥಿಯಾಗುವುದು ಗ್ಯಾರಂಟಿ ಅನ್ನೋ ಪರಿಸ್ಥಿತಿ ನಿರ್ಮಾಣವಾಗಿತ್ತು.

ಹಲ್ಲುಜ್ಜಿ ಮುಖ ತೊಳೆದು ನಿಧಾನವಾಗಿ ಬಾಗಿಲು ತೆರೆದು ಸ್ವಲ್ಪ ಇಣುಕಿ ನೋಡಿದೆ ಅಲ್ಲೇ ನಿಂತಿದ್ದಾಳೊ ಹೇಗೆ ಅನ್ನೊ ಹಾಗೆ. ಅದೋ ದೂರದಲ್ಲಿ ಕಸ ಗುಡಿಸುವ ಸದ್ದಾಗುತ್ತಿತ್ತು, ನಿಧಾನಕ್ಕೆ ಅಲ್ಲಿ ಹೋಗಿ ಹಿಂದಿನಿಂದ, ಕೈಗಳೆರಡೂ ಬಿಡಿಸಲಾಗದ ಹಾಗೆ ಬಾಚಿ  ತಬ್ಬಿಕೊಂಡೆ, ಕೊಸರಾಡಿದಳು ಬಿಡಿಸಿಕೊಳ್ಳಲು, ಹಿಡಿತ ಸಡಲಿಸಲಿಲ್ಲ "ರೀ ಈಗ್ ಬಿಡ್ತಿರೋ ಇಲ್ವೊ" ಅಂತ ಕೇಳಿದಳು "ಏಟು ಕೊಡಲ್ಲ ಅಂತ ಆಣೆ ಮಾಡು ಬಿಡ್ತೀನಿ" ಅಂದ್ರೆ "ಆಣೆ ಪ್ರಮಾಣ ಮಾಡಿ ಮುರಿದು ಹಾಕೋ ಮನಸಿಲ್ಲ" ಅಂದ್ಲು, ಒಟ್ಟಿನಲ್ಲಿ ಏಟು ಗ್ಯಾರಂಟಿ ಅಂತನ್ನೊ ಹಾಗೆ. ಕೈಬಿಟ್ಟು ಓಟಕ್ಕಿತ್ತೆ, ಓಡಾಡಿಸಿ ಬರಿಗೈಯಲ್ಲೇ ಏಟು ಕೊಟ್ಟಳು, ಓಡಿ ಸುಸ್ತಾಗಿ ಎದೆ ಹಿಡಿದುಕೊಂಡು ಏದುಸಿರುಬಿಡುತ್ತ ಕೂತೆ, ಒಮ್ಮೆಲೇ ಗಾಬರಿಯಾದಳು. "ಏನಾಯ್ತು" ಅನ್ನುತ್ತ ಎದೆ ನೀವಿ, ಕೈಗೆ ಲೋಟ ನೀರಿತ್ತಳು, "ಏನಿಲ್ಲ ಬರೀ ಕೂತು ಕೆಲ್ಸ ಮಾಡೊನು ಹೀಗೆ ಒಮ್ಮೆಲೆ ಓಡಾಡಿದರೆ ಏನಾಗಬೇಡ, ಸುಸ್ತಾಗಿ ಕೂತೆ ಅಷ್ಟೇ... ಹಾರ್ಟ್ ಅಟ್ಯಾಕ ಎನಾದ್ರೂ ಆಗಿ ಸತ್ತು ಹೋಗ್ತೀನಿ ಅಂದುಕೊಂಡ್ಯಾ" ಅಂತಂದೆ. "ಈ ಸುಡುಗಾಡು ಪೇಪರು ಸುಟ್ಟು ಬರೋವಷ್ಟು ಸಿಟ್ಟು ಬರ್ತಿದೆ, ಎಲ್ಲ ಅದ್ರಿಂದಲೇ ಶುರುವಾಗಿದ್ದು" ಅಂತ ಸಿಡುಕಿದಳು "ಸುಡುಗಾಡು ಶವ ಸುಡೊಕಲ್ವೇ" ಅಂತ ಮತ್ತೆ ವಿಷಯಕ್ಕೆ ಮರಳಿದೆ. ನಾನಂತೂ ಈ ವಿಷಯ ಅಲ್ಲಿಗೇ ಬಿಡೊದಿಲ್ಲ ಅನ್ನೋದು ಅವಳಿಗೂ ಖಾತ್ರಿ ಆಯ್ತು, "ಅಲ್ಲ ಹೊತ್ತಲ್ಲದ ಹೊತ್ತಿನಲ್ಲಿ ಸತ್ತು ಹೋಗೊ ವಿಷಯದ ಚಿಂತೆ ಯಾಕೆ?" ಅಂತ ಸಮಚಿತ್ತದಿಂದ ನುಡಿದಳು, ನನಗೂ ಅವಳು ಭಾವುಕತೆ ಬಿಟ್ಟು ವಾಸ್ತವಿಕವಾಗಿ ಮಾತಾಡುವುದೇ ಬೇಕಿತ್ತು. "ಮತ್ತೆ ಯಾವ ಹೊತ್ತಲ್ಲಿ ಮಾತಾಡೋಣ ಹೇಳು" ಅಂದೆ. ಪೊರಕೆ ಬೀಸಾಕಿ ಪಕ್ಕ ಬಂದು ಕೂತಳು, ಹೇಳು ಮಹರಾಯ ನಿನ್ನದೂ ಈಗಲೇ ಆಗಲಿ ಅಂತನ್ನೊ ಭಾವದಲ್ಲಿ.

"ಹೊತ್ತಲ್ಲದ ಹೊತ್ತಲ್ಲಿ ಅಂತ ಏನಿದೆ, ಯಮರಾಯ ಏನು ಹೇಳಿ ಕೇಳಿ ಮಹೂರ್ತ ತೆಗೆಸಿಟ್ಟುಕೊಂಡು, ವೀಕೆಂಡು ಫ್ರೀ ಇದೀಯಾ ಬರ್ತಾ ಇದೀನಿ ಅಂತ ಅಪಾಯಿಂಟಮೆಂಟ ತೆಗೆದುಕೊಂಡಾ ಬರ್ತಾನೇ" ಅಂದೆ, ನಸುನಗುತ್ತ "**ಸಾಯೋಕೂ ಪುರೊಸೊತ್ತಿಲ್ಲದ ಸಾಫ್ಟವೇರ ಇಂಜನೀಯರಗಳು ನೀವು, ವೀಕೆಂಡೂ ಕೇಳಿಕೊಂಡೆ ಬರಬೇಕೇನೊ ಯಮ**, ಹಾಗೇನಾದ್ರೂ ಬಂದರೆ ನನ್ನಾಕೆ ಹತ್ರ ಕೇಳು ಅಂತ ಕಳಿಸಿ, ನಾಳೆ ಅಲ್ಲ ನಾಡಿದ್ದು ಬಾ ಅಂತ ಅವನನ್ನೇ ಓಡಾಡಿಸಿ ಸೋತು ಸತ್ತು ಹೋಗುವಂತೆ ಮಾಡುತ್ತೇನೆ" ಅಂತ ಕಿಚಾಯಿಸಿದಳು. ಕೊಲ್ಲಲು ಬರುವ ಯಮನನ್ನೇ ಕೊಲ್ಲುವ ಯೋಚನೆ ಇವಳ್ದು ಒಳ್ಳೇ ಕ್ರಿಮಿನಲ ಐಡಿಯಾ... "ಹ್ಮ್ ಅದು ಬಿಡು ನಾ ಸತ್ತು ಹೋದರೆ ಅಳ್ತೀಯಾ" ಅಂದೆ "ಮತ್ತಿನ್ನೇನು" ಅಂದವಳ ಕಣ್ಣಾಲಿಗಳು ಆಗಲೇ ತುಂಬಿಕೊಂಡಿದ್ದವು, "ಆದ್ರೆ ನಿಜವಗ್ಲೂ ಅಳಬೇಕಾ?" ಅಂದ್ರೆ ಏನು ಇಂಥ ಎಡವಟ್ಟು ಪ್ರಶ್ನೇ ಅನ್ನೊ ಹಾಗೆ ನೋಡಿ, "ದುಖಃ ಅದರೆ ಅಳು ಬಂದೆ ಬರುತ್ತೇ" ಅಂದ್ಲು, "ಹಾಗಾದ್ರೆ ಎಷ್ಟು ದಿನ ಅಳ್ತೀಯಾ?" ಅಂದೆ "ಇನ್ನೇನು ಜೀವನ ಪೂರ್ತಿ

ಅಳಕೊಂಡು ಕೂರೊಕಾಗುತ್ತಾ, ಕೆಲವು ದಿನ, ಆಮೇಲೆ ಮತ್ತೆ ಎಲ್ಲ್ ಮಾಮೂಲಿ ಆಗತ್ತೆ" ಅಂದ್ಲು. ಅವಳ ನಿರ್ಭಿಡೆಯ ಸತ್ಯವಾದ ಉತ್ತರ ಕೇಳಿ ಖುಷಿಯಾಯ್ತು, ಸ್ವಲ್ಪ ಹೊತ್ತು ಏನೊ ಯೋಚಿಸಿದವರಂತೆ ಮಾಡಿ "ರೀ ನೀವೇ ಇಲ್ಲದ ಮೇಲೆ ನಾನೇನು ಮಾಡ್ಲಿ ಇಲ್ಲಿ, ನಿಮಗೆ ಹೇಗೂ ಟಿಕೆಟ್ ಕೊಟ್ಟ ದೇವರಿಗೆ, ಅದರೊಂದಿಗೆ ನನಗೂ ಒಂದು ಫ್ರೀ ಟಿಕೆಟ್ ಕೊಟ್ಟು ಬಿಡು ಅಂತ ಕೇಳ್ತೀನ್ರಿ" ಅಂತಂದ್ಲು "ಲೇ ನೀ ಸ್ವಲ್ಪ ಲೇಟಾಗಿ ಬಾರೇ, ನಾನು ಹೋಗಿ ಸ್ವಲ್ಪ ಸ್ವರ್ಗ ಎಂಜಾಯ್ ಮಾಡ್ತೀನಿ" ಅಂದೆ, "ಸ್ವರ್ಗಕ್ಕೆ ಹೋಗ್ತೀರಿ ಅಂತ ಏನು ಗ್ಯಾರಂಟಿ, ನರಕಕ್ಕೇ ಹೋದ್ರೆ", "ಏಯ್ ನನ್ನ ಸ್ವರ್ಗದ ಕನಸುಗಳಿಗೆ ಕಲ್ಲು ಹಾಕಬೇಡ ಕಣೇ, ಇಂದ್ರ ನನ್ನ ಲೇಖನ ಓದಿಯಾದ್ರೂ ಪ್ರಭಾವಿತನಾಗಿ ಅಲ್ಲೇ ಕರಿಸಿಕೊಳ್ತಾನೆ ಅನ್ನೊ ಅಶಾಭಾವನೆ ಇದೆ ನಂಗೆ, ಒಂಥರಾ ಇಂದ್ರನ ಅಸಿಸ್ಟೆಂಟ ಹುದ್ದೆ ಕಬಳಿಸೊ ಯೋಚನೆ ಇದೆ, ಅವನ ಜತೆ ನಾನೂ ಕಾಲ ಮೇಲೆ ಕಾಲು ಹಾಕಿಕೊಂಡು ಕುಳಿತುಕೊಂಡು ಸುರಾಪಾನ ಸುಧೆ ಹೀರುತ್ತ, ಗಂಧರ್ವರ ಹಾಡಿಗೆ ಕಾಲು ಕುಣಿಸುತ್ತ, ನರ್ತಿಸುತ್ತಿರುವ ರಂಭೆ ಮೇನಕೆ ಊರ್ವಶಿಯರನ್ನು ನೋಡುತ್ತ... ಆಹಾಹಾ" ಅಂತ ಕಲ್ಪನಾ ಲೋಕದಲ್ಲಿದ್ದರೆ, "ಅದಕ್ಕೇ ಏನೊ ಸಾಹೇಬ್ರಿಗೆ ಸಾಯೋ ಯೋಚನೆ ಬಂದಿದ್ದು, **ದೇವರೇ, ಮೇಲೆ ಕರಿಸಿಕೊಂಡ ಮೇಲೆ, ಹಿಡಂಬೆ, ಮಂಥರೆ, ಶೂರ್ಪನಖಿಯರ ಸೆಲ್‌ನಲ್ಲೇ ಇವರನ್ನೂ ಕೂಡಿ ಹಾಕು**" ಅಂತ ಆಕಾಶದತ್ತ ನೋಡಿ ಬೇಡಿಕೊಂಡಳು. "ಎಲ್ರೂ ಗಂಡನಿಗೆ ಒಳ್ಳೇದಾಗಲಿ ಅಂತ ಬೇಡಿಕೊಂಡರೆ ನೀನೇನೊ" ಅಂತ ಬೇಜಾರಾದ್ರೆ. "ರೀ ನಿಜಕ್ಕೂ ಸ್ವರ್ಗ ಅಂತಿದೆಯಾ?" ಅಂತ ಕೇಳಿದಳು ಕಣ್ಣರಳಿಸಿಕೊಂಡು. "ಅಲ್ಲಿದೆಯೋ ಇಲ್ವೊ ನಂಗೂ ಗೊತ್ತಿಲ್ಲ ಬಿಡು ಎಕ್ಸಪೀರಿಯನ್ಸ ಇಲ್ಲ ನೋಡು, ಇದ್ರೆ ಏನು ಪಿಕನಿಕ ಅಂತ ಹೋಗೋಕಾದ್ರೂ ಆಗುತ್ತಾ ಅದೂ ಇಲ್ಲ" ಅಂದೆ "ಏನು ಸ್ವರ್ಗನೊ ಏನೊ, ಸತ್ತರೆ ಸ್ವರ್ಗ ಬೇಕು ಎಲ್ರಿಗೂ, ಆದ್ರೆ ಸಾಯೋದು ಬೇಡ" ಅಂತ ವೇದಾಂತ ನುಡಿದಳು. "ಅಲ್ಲಿನೇ ಸ್ವರ್ಗ ಅಂತ ಯಾಕೆ ಅನ್ಕೊಬೇಕು, ಇಲ್ಲಿನೇ ಸ್ವರ್ಗ ಇಲ್ವಾ, ನೀನಿರುವ ನನ್ನ ಜೀವನ ಸ್ವರ್ಗನೇ ಆಗಿದೆ ಅಲ್ಲ" ಅಂತ ಪುಸಲಾಯಿಸಿದೆ. "ಮಹಾಪ್ರಭುಗಳೇ ಸುರಾಪಾನ ಬೇಕಾ" ಅಂತಂದಳು. "ಇಲ್ಲ ಸಧ್ಯ ಚಹಾಪಾನ ಸಾಕು" ಅಂದೆ ಚಹ ಮಾಡಲು ಮೇಲೆದ್ದಳು. ರಾಗವಾಗಿ "ನಯನ ಮನೋಹರಿ, ನಾಟ್ಯಮಯೂರಿ, ನನ್ನಾಕೆ... ನನಗ್ಯಾಕೆ ಆ... ಮೇನಕೆ... ರಂಭೆ ಊರ್ವಶಿ.. ಬೇಕೆ" ಅಂತ ಹಾಡುತ್ತಿದ್ದರೆ "ಇಲ್ಲೇ ಇದೆ ಇನ್ನೂ ಪೊರಕೆ... ಇನ್ನೆರಡು ಏಟು ಬೇಕೆ" ಅಂತ ಪೂರ್ಣಗೊಳಿಸುತ್ತ ಹಂಸ ನಡಿಗೆಯಲ್ಲಿ ಹೆಜ್ಜೆ ಹಾಕುತ್ತ ನಡೆದಳು.

ಚಹ ಹೀರುತ್ತ ಕೂತಿದ್ದವನಿಗೆ ಅವಳ ಪ್ರಶ್ನೇ ತೂರಿ ಬಂತು "ರೀ ಮುತ್ತೈದೇ ಸಾವು ಅಂತ, ನಾನೇ ಮೊದಲು ಸತ್ತು ಹೋದರೆ, ಮತ್ತೆ ಮದುವೆ ಆಗ್ತೀರ" ಅಂದ್ಲು. "ಆಗ ಪಕ್ಕದಮನೆ ಪದ್ದು ನನ್ನ ಮದುವೆ ಆಗ್ತಾಳೆ ಅಂತೀಯಾ" ಅಂದೆ. "ರೀ ಪದ್ದುಗೆ ಮದುವೆ ಆಗಿದೆ, ಅವಳೆಲ್ಲಿ ಆಗಬೇಕು" ಅಂದ್ಲು, "ಛೇ ಹೌದಲ್ವಾ, ಮತ್ತಿನ್ಯಾರು ಆಗ್ತಾರೆ ಬಿಡು" ಅಂದೆ. "ನಮ್ಮ ನರ್ಸ ನರ್ಗೀಸ್ ಕೇಳಿದ್ರೆ, ನಾನೇ ಬೇಕಾದ್ರೆ ಮಾತಾಡ್ತೀನಿ" ಅಂದ್ಲು, ಈಗಲೇ ಇನ್ನೊಂದು ಮದುವೆ ಮಾಡಿ ಬಿಡ್ತಾಳೆ ಅನ್ನೋ ಹಾಗಿತ್ತು. "ಲೇ ನಿನ್ನಂಥಾ ಹುಡುಗಿ ನನಗೆಲ್ಲೇ ಸಿಕ್ತಾಳೆ, ಒಂದು ವೇಳೆ ನಾನಿಲ್ಲ ಅಂದ್ರೆ ನೀನು ಬೇರೆ ಮದುವೆ ಆಗ್ತೀಯಾ" ಅಂದೆ, "ಅದನ್ನೆಲ್ಲ ಸಮಾಜ ಒಪ್ಪಲ್ಲ ಬಿಡಿ, ನೋಡು ಹೇಗೆ ಬೇರೆ ಮದುವೆ ಆದ್ಲು ಅಂತ ನಗಾಡತ್ತೇ" ಅಂದ್ಲು. "ಒಹೊ ಹಾಗಾದ್ರೆ ಹುಡುಗ ಮಾಡಿದ್ರೆ ತಪ್ಪಲ್ಲ, ಹುಡುಗಿ ಮಾಡಿದ್ರೆ ತಪ್ಪಾ" ಅಂದೆ. "ಸಮಾಜ ಇನ್ನೂ ಅಷ್ಟು ವಿಕಸಿತವಾಗಿಲ್ಲ" ಅಂದ್ಲು, "ಆಗಬೇಕು, ಯಾಕೇ ಯಾವುದೊ ಹುಡುಗಿ ಚಿಕ್ಕ ವಯಸ್ಸಿನಲ್ಲೇ ವಿಧವೆಯಾದ್ರೆ ಕರ್ಮ ಅಂತ ಹಾಗೇ ಇರಬೇಕು, ಅವಳಿಗೂ ಆಸೆ ಆಕಾಂಕ್ಷೆ ಅಂತ ಇಲ್ವಾ, ಅವಳು ಎಷ್ಟು ದಿನ ಅಳಬೇಕು, ಎಷ್ಟು ದಿನದ ಮೇಲೆ ಮತ್ತೆ ಸಾಮಾನ್ಯ ಜೀವನಕ್ಕೆ ಮರಳಬೇಕು, ಅಂತ ಈ ಸಮಾಜ ಯಾಕೆ ನಿರ್ಧರಿಸಬೇಕು, ವಿಧುರರು ಯಾಕೆ ಅಂಥವರ ಕೈ ಹಿಡಿಯಬಾರದು, ಸಮಾಜ ಕೂಡ ಬದಲಾಗ್ತಿದೆ, ಬದಲಾಗತ್ತೆ, ನಿಜಕ್ಕೂ ಒಳ್ಳೇ ಜೋಡಿ ಸಿಕ್ಕರೆ ಮದುವೆಯಾದರೆ ತಪ್ಪೇನಿದೆ" ಅಂದೆ. "ಹಾಗಾದಾಗ ನೋಡೋಣ ಬಿಡಿ, ಅಲ್ದೇ ಮಕ್ಕಳು ಎಲ್ಲ ಇದ್ರೆ ಇನ್ನೂ ತೊಂದ್ರೆ" ಅಂದ್ಲು, "ಅದೂ ಸರಿ, ಮಕ್ಕಳಿದ್ರೆ ಅವರ ಬಗ್ಗೆಯೂ ಯೋಚಿಸಬೇಕಾಗ್ತದೆ, ಅದ್ರೆ ಅವೆಲ್ಲ ಮೀರಿ, ಸಾಧ್ಯವಿದ್ದರೆ ಯಾಕಿಲ್ಲ, ಒಳ್ಳೆ ಜೋಡಿ ಸಿಕ್ರೆ ನೀನು ಮದುವೆ ಆಗ್ತೀನಿ ಅಂತ ಆಣೆ ಮಾಡು" ಅಂದೆ. "ನಿಮ್ಮೇಲೆ ಆಣೆ ಮಾಡಿದ್ರೆ ಏನು ಬಂತು ಸತ್ತೇ ಹೋದ ಮೇಲೆ, ಇನ್ನು ನನ್ನ ಮೇಲೆ ನಾ ಆಣೆ ಮಾಡಿಕೊಂಡು, ಪಾಲಿಸದೆ ನಾ ಸತ್ತು ಹೋದ್ರೆ, ಅದಕ್ಕೇ ಏನೂ ಬೇಡ, ಆದ್ರೆ ನೀವು ಹೇಳಿದ್ದು ಸರಿ ಒಪ್ಕೊತೀನಿ, ಇಂಥದ್ದೇ ತರಲೆ ತುಂಟ ಸಿಕ್ರೆ ಆಗ್ತೀನಿ ಆಯ್ತಾ" ಅಂದ್ಲು. ಎಷ್ಟೊ ಹೊತ್ತು ಮಾಡಿಸಿರುವ ಪಾಲಸಿಗಳು, ಬ್ಯಾಂಕ ಅಕೌಂಟಗಳು ಎಲ್ಲ ಮಾಹಿತಿ ನೀಡುತ್ತಿದ್ದೆ, ನಾನಿಲ್ಲದಿದ್ರೆ ಯರ್ಯಾರು ಏನು ಹೆಲ್ಪ ಮಾಡಬಹುದು, ಯಾರ್ಯಾರಿಗೆ ಏನು ಕೇಳಬಹುದು ಎಲ್ಲ ಮಾಹಿತಿ ಮನವರಿಕೆ ಮಾಡಿಕೊಟ್ಟೆ, ಸುಮ್ಮನೇ ಕೇಳುತ್ತಿದ್ಲು, ತಲೆಗೆ ಎಷ್ಟು ಹೋಯಿತೊ ಗೊತ್ತಿಲ್ಲ.

ಒಂದಿಲ್ಲೊಂದು ದಿನ ಸತ್ತು ಹೋಗೊದು ನಿಜವೇ ಆದ್ರೂ ಇಂದೇ ಆ ಬಗ್ಗೆ ಯೋಚಿಸಲೂ ಹಿಂದೇಟು ಹಾಕುತ್ತೇವೆ, ಯಾರಿಗೆ ಗೊತ್ತು ಯಾವ ಮುಸುಕಿನ ಜಾವದಲ್ಲಿ ಜವರಾಯನ ಕರೆಗೆ ಓಗೊಡಬೇಕಾಗುತ್ತದೋ ಏನೊ. ಇರುವಷ್ಟು ದಿನ ಎಲ್ಲ ಸರಿಯಾಗೇ ಇರುತ್ತದೇ, ನಮ್ಮ ಮೇಲೆ ಅವಲಂಬಿತರಾಗಿರುವವರ ಬಗ್ಗೆ ಇರುವಾಗಲೇ ಯೊಚಿಸುವುದೊಳಿತು, ಹಾಗಂತ ನಾನೇನು ಇನ್ಸೂರನ್ಸ ಕಂಪನಿ ಏಜೆಂಟ್ ಆಗಿದ್ದೇನೆಂದು ತಿಳಿಯಬೇಡಿ!, ಬರೀ ಆರ್ಥಿಕವಾಗಿ ಅಂತೇ ಅಲ್ಲ ಮಾನಸಿಕವಾಗಿ ಕೂಡ ಅವರಿಗೆ ಆಗಬಹುದಾದ ಎಲ್ಲವನ್ನೂ ಯೋಚಿಸಿ ಎಲ್ಲದಕ್ಕೂ ಪ್ಲಾನ ಮಾಡಿದ್ದರೆ ಒಳ್ಳೇದೆ ಅಲ್ವಾ. ನಾ ಸತ್ತು ಹೋದರೆ ಅಂತ ಒಮ್ಮೆ ಯೋಚಿಸಿ ಮುಂದಾಗಬಹುದಾದ ಎಲ್ಲ ಘಟನೆಗಳ ಬಗ್ಗೆ ಕ್ರಮ ಅಗತ್ಯ ಅಂತ ನನ್ನನಿಸಿಕೆ.

ರಾತ್ರಿ ಊಟ ಮಾಡಿ ಮಲಗಿದಾಗಲೂ ಅದೇ ಯೋಚನೆಗಳು ಇನ್ನೂ ತಲೆಯಲ್ಲಿದ್ದವು, "ರೀ ನಾ ಸತ್ತು ಹೋಗಿ ಮೋಹಿನಿ ಆಗಿ ಬಂದು ನಿಮ್ಮನ್ನ ಕಾಡಿದರೆ" ಅಂದ್ಲು, "ಹ್ಮ್ ಹಾಡು ಹಾಡ್ತಾ ಬಿಳಿ ಸೀರೆ ಉಟ್ಕೊಂಡು... ಗೆಜ್ಜೆ ಸದ್ದು ಮಾಡ್ತಾ ಹೋಗ್ತಾ ಇದ್ರೆ... ಲೇ ಹಾಗೇನಾದ್ರೊ ಅದ್ರೆ ನೀನು ಬಿಳಿ ಸೀರೆ ಹಾಕೋಬೇಡ, ನಂಗೆ ಈ ತಿಳಿ ನೀಲಿ ಇಷ್ಟ ಆ ಸೀರೇನೇ ಹಾಕೊ ಒಕೇನಾ" ಅಂದೆ "ರೀ ಅದು ಮೋಹಿನಿ, ಬಿಳಿ ಸೀರೆನೇ ಹಾಕೋದು, ಏನೊಪ್ಪಾ ಬೇಕಿದ್ರೆ ನಿಮ್ಗೆ ಅಂತ ನೀಲಿ ಬಾರ್ಡರ್ ಇರೋ ಬಿಳಿ ಸೀರೆ ಹಾಕೋತೀನಿ ಆಯ್ತಾ" ಅಂದ್ಲು. ಮೋಹಿನಿ ಮಾತಾಡಲು ಬಿಟ್ರೆ ಮಾತಾಡ್ತಾನೇ ಇರ್ತಾಳೆ ಅಂತ... "ಅದೋ ಅಲ್ಲಿ ಬಾಗಿಲ ಮರೆಯಲ್ಲಿ ಯಾರೊ ನಿಂತ ಹಾಗೆ ಕಾಣಿಸ್ತಾ ಇದೆ ಅಲ್ವಾ, ದೆವ್ವ ಏನಾದ್ರೂ... " ಅಂತಿದ್ದಂಗೇ, ನಿಧಾನಕ್ಕೆ ಸರಿದು ನನ್ನೆಡೆಗೆ ಬಂದು ಅವುಚಿಕೊಂಡು ಮಲಗಿದಳು, "ಅದೊ ನೋಡು ನಮ್ಮೆಡೆಗೇ ಬರ್ತಾ ಇರೊ ಹಾಗೆ ಕಾಣ್ತಿದೆ" ಅಂದೆ. ಇನ್ನಷ್ಟು ಹತ್ತಿರವಾದಾಳು ಹೆದರಿ ಅಂತ. "ಯಾರೂ ಇಲ್ಲ ಅಲ್ಲಿ ನನ್ನೇ ಹೆದರಿಸ್ತೀರಾ" ಅಂತನ್ನುತ್ತ ತಳ್ಳಿದಳು... ಹಾಗೆ ನಿದ್ರೆ ಹೋದವನಿಗೆ

ಸ್ವಲ್ಪ ಹೊತ್ತಿನಲ್ಲಿ "ತಂಗಾಳಿಯಲ್ಲಿ ನಾನು ತೇಲಿ ಬಂದೆ, ನಿನ್ನನ್ನು ಪ್ರೀತಿಯಿಂದ ಸೇರಲೆಂದೇ.. ಓ ಇನಿಯಾ... ನನ್ನನ್ನು ಸೇರಲೂ ಬಾ..." ಅಂತ ಹಾಡುವುದು ಕೇಳಬೇಕೇ... ಇವಳು ಎಲ್ಲಿ ನಿಜವಾಗಿಯೂ ಮೋಹಿನಿ ಆದಳೋ ಅಂತ ಹೆದರಿ ಬೆವರಿದೆ, ಪಕ್ಕದಲ್ಲಿದ್ದವಳ ಕೈ ಗಟ್ಟಿಯಾಗಿ ಹಿಡಿದೆ... "ಲೇ ಮೋಹಿನಿ" ಅಂತ ಚೀರಿದೆ... "ರೀ ಮೋಹಿನಿನೂ ಇಲ್ಲ ಏನೂ ಇಲ್ಲ, ಅದು ನನ್ನ ಮೊಬೈಲ್ ರಿಂಗಟೋನು" ಅಂತನ್ನುತ್ತ ಯಾರು ಇಷ್ಟೊತ್ತಿನಲ್ಲಿ ಫೋನು ಮಾಡುತ್ತಿರುವವರು ಅಂತ ನೋಡಲೆದ್ದಳು. ಒಂದು ಕ್ಷಣ ಹೆದರಿ ಸತ್ತೇ ಹೋಗಿದ್ದೆ ಅನಿಸುತ್ತಿತ್ತು.

ಈ ಲೇಖನದಲ್ಲಿ ಬರುವ ಎಲ್ಲ ಪಾತ್ರಗಳೂ ಕಾಲ್ಪನಿಕ, ಯಾವುದೇ ಹೋಲಿಕೆ ಕಂಡುಬಂದಲ್ಲಿ ಅದು ಕೇವಲ ಆಕಸ್ಮಿಕ.

ಈ ಲೇಖನ ಓದಿ ಯಾರಾದ್ರೂ ಹೀಗೆ ಪ್ರಶ್ನೆ ತಮ್ಮ ಪತ್ನಿಯನ್ನು ಕೇಳಿ ಏಟು ತಿಂದ್ರೆ ನಾನು ಹೊಣೆಯಲ್ಲ! ಜೀವನ ಎಷ್ಟು ಕ್ಷಣಿಕ ಅಲ್ವಾ ಅನ್ನಿಸಿ ಬರೆದ ಲೇಖನ, ಇಂದಿರೊರು ನಾಳೆ ಇರಲ್ಲ... ಹಾಗಂತ ನಾಳೆ ಸತ್ತು ಹೋಗುವವರಂತೆಯೂ ಜೀವಿಸಬೇಕಿಲ್ಲ, ಆದ್ರೂ ಎಲ್ಲ ಪ್ಲಾನ ಮಾಡಿಟ್ಟಿದ್ರೆ ಒಳ್ಳೇದು ಅಂತ ಹೇಳಲು ಮಾತ್ರ. ಹಾಂ ಅಂದ ಹಾಗೆ, ನಾ ಸತ್ತು ಹೋದ್ರೆ ನನ್ನ ಬ್ಲಾಗ ಓದುಗರಿಗೆ ಗೊತ್ತಾಗೊ ಹಾಗೆ ಕಮೆಂಟ ಒಂದು ಹಾಕು ಅಂತ ಗೆಳೆಯನಿಗೆ ಹೇಳಿಟ್ಟಿದ್ದೇನೆ, ಅವನು ಮರೆತರೂ ನಿಮಗೆ ಯಾರಿಗಾದ್ರೂ ಗೊತ್ತಾದ್ರೆ, ಇಲ್ಲ ಬಹಳ ದಿನ ಹೇಳದೇ ಕೇಳದೇ ನಾ ಬರೆಯುವುದು ಬಿಟ್ಟರೆ, ಒಂದು ಸಾರಿ ಕೆಳಗಿರುವ ಮೇಲ ಆಯ್.ಡಿಗೇ ಮೇಲ್ ಮಾಡಿ ಉತ್ತರ ಬರದೇ ಇದ್ರೆ, ಕಮೆಂಟ ಹಾಕಿದ್ರೆ ಸಾಕು(ಯಾಕೆಂದ್ರೆ ಎಲ್ಲ ಮೇಲ್‌ಗಳಿಗೂ ತಪ್ಪದೇ ಉತ್ತರಿಸುತ್ತೇನೆ), ಇಷ್ಟು ದಿನ ತಪ್ಪದೇ ಬರೆಯುತ್ತಿದ್ದವ ಎಲ್ಲಿ ಕಣ್ಮರೆಯಾದ ಅಂತ ಎಲ್ರೂ ಅನ್ಕೋಬಾರದು ನೋಡಿ :)

ಇಷ್ಟೊತ್ತು ಓದಿದ್ದು ಇಷ್ಟಾ ಆದ್ರೆ ಮೆಚ್ಚಿ, ಸಿಟ್ಟು ಬಂದಿದ್ರೆ ಚುಚ್ಚಿ ಇಂಚೆ (ಇ-ಅಂಚೆ) ಹಾಕಿ... ನನ್ನ ವಿಳಾಸ pm@telprabhu.com . ಹೀಗೆ ನೀವು ಓದಿ ಖುಶಿಯಾಗಿದ್ರೆ ನಿಮ್ಮ ಗೆಳೆಯರಿಗೂ ಇದನ್ನ ಕಳಿಸಿ, ಸಂತೋಷ ಇರೋದೇ ಹಂಚೋಕೆ ತಾನೆ...